ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

26.12.2025 1500 hrs

******

ಮುಖ್ಯಾಂಶಗಳು:

1. ಇಪ್ಪತ್ತು ಮಕ್ಕಳಿಗೆ ಪ್ರಧಾನಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರದಾನ ಮಾಡಿದ ರಾಷ್ಟ್ರಪತಿ ದ್ರೌಪದಿ ಮುರ್ಮು
2. ಮೂರು ದಿನಗಳ ಪ್ರಧಾನ ಕಾರ್ಯದರ್ಶಿಗಳ ಐದನೇ ರಾಷ್ಟ್ರೀಯ ಸಮ್ಮೇಳನ ಇಂದಿನಿಂದ ಆರಂಭ; ನಾಳೆ ಅಧ್ಯಕ್ಷತೆ ವಹಿಸಲಿರುವ ಪ್ರಧಾನಿ
3. ನವದೆಹಲಿಯಲ್ಲಿಂದು ಭಯೋತ್ಪಾದನಾ ನಿಗ್ರಹ ಸಮಾವೇಶ ಉದ್ಘಾಟಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ
4. ಮಹಿಳಾ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿ; ಮೂರನೇ ಪಂದ್ಯದಲ್ಲಿಂದು ಭಾರತ-ಶ್ರೀಲಂಕಾ ಹಣಾಹಣಿ

********

ವೀರ್ ಬಾಲ್ ದಿವಸ್ ಅಂಗವಾಗಿ ನವದೆಹಲಿಯಲ್ಲಿಂದು ನಡೆದ ಸಮಾರಂಭದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರ ಪ್ರದಾನ ಮಾಡಿದರು. ಈ ವರ್ಷ, ಅತ್ಯುತ್ತಮ ಸಾಧನೆಗಳನ್ನು ಪ್ರದರ್ಶಿಸಿದ ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೨೦ ಮಕ್ಕಳಿಗೆ ಪ್ರಶಸ್ತಿ ನೀಡಲಾಗಿದೆ. ಈ ಸಂದರ್ಭದಲ್ಲಿ ಮಾತನಾಡಿದ ರಾಷ್ಟ್ರಪತಿ, ಈ ಪ್ರಶಸ್ತಿ ದೇಶಾದ್ಯಂತದ ಮಕ್ಕಳಿಗೆ ಸ್ಫೂರ್ತಿ ನೀಡುತ್ತದೆ ಎಂದು ಹೇಳಿದರು. ಪ್ರಶಸ್ತಿ ಪುರಸ್ಕೃತ ಮಕ್ಕಳು ಶೌರ್ಯ, ಕಲೆ, ಸಂಸ್ಕೃತಿ, ಪರಿಸರ, ನಾವೀನ್ಯತೆ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಅಸಾಧಾರಣ ಕೊಡುಗೆಗಳನ್ನು ನೀಡಿದ್ದಾರೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ತಿಳಿಸಿದರು.

ಧ್ವನಿ; ರಾಷ್ಟ್ರಪತಿ ದ್ರೌಪದಿ ಮುರ್ಮು ( ೨೮ ಸೆಕೆಂಡ್ಸ್ )

ಪ್ರಶಸ್ತಿ ಪುರಸ್ಕೃತ ಮಕ್ಕಳೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ ನಡೆಸಿದರು. ಬಳಿಕ ನಡೆದ ಕಾರ್ಯಕ್ರಮದಲ್ಲಿ ಮಕ್ಕಳನ್ನುದ್ದೇಶಿಸಿ ಮಾತನಾಡಿದ ಅವರು, ವೀರ್ ಬಾಲ್ ದಿವಸ್, ಶ್ರದ್ಧೆ ಮತ್ತು ಭಾವನೆಯಿಂದ ಕೂಡಿದ ದಿನವಾಗಿದೆ. ಇಂದು ಭಾರತ ಗುಲಾಮಗಿರಿಯ ಮನಸ್ಥಿತಿಯಿಂದ ಮುಕ್ತಿ ಪಡೆಯುವ ದೃಢ ನಿಶ್ಚಯದೊಂದಿಗೆ ಮುನ್ನಡೆದಿದೆ. ನಮ್ಮ ಹೋರಾಟಗಾರರ ಬಲಿದಾನ, ಶೌರ್ಯಗಾಥೆಗಳನ್ನು ಸ್ಮರಿಸಲಾಗುವುದು ಎಂದರು.

********

ನವದೆಹಲಿಯಲ್ಲಿಂದು ಆರಂಭವಾಗಲಿರುವ ಮೂರು ದಿನಗಳ ಪ್ರಧಾನ ಕಾರ್ಯದರ್ಶಿಗಳ ಐದನೇ ರಾಷ್ಟ್ರೀಯ ಸಮ್ಮೇಳನದ ಅಧ್ಯಕ್ಷತೆಯನ್ನು ಪ್ರಧಾನಿ ನರೇಂದ್ರ ಮೋದಿ ವಹಿಸಲಿದ್ದಾರೆ. ನಾಳೆ ಮತ್ತು ನಾಡಿದ್ದು ಪ್ರಧಾನಿ ಸಮ್ಮೇಳನದ ಅಧ್ಯಕ್ಷತೆ ವಹಿಸಲಿದ್ದಾರೆ. ರಾಷ್ಟ್ರೀಯ ಅಭಿವೃದ್ಧಿ ಆದ್ಯತೆಗಳ ಕುರಿತು ರಚನಾತ್ಮಕ ಮತ್ತು ನಿರಂತರ ಸಂವಾದದ ಮೂಲಕ ಕೇಂದ್ರ - ರಾಜ್ಯ ಪಾಲುದಾರಿಕೆಯನ್ನು ಬಲಪಡಿಸುವಲ್ಲಿ ಈ ಸಮ್ಮೇಳನವು ಮತ್ತೊಂದು ಪ್ರಮುಖ ಮೈಲಿಗಲ್ಲನ್ನು ಗುರುತಿಸುತ್ತದೆ. ಸಮ್ಮೇಳನವು, ಕೇಂದ್ರ ಮತ್ತು ರಾಜ್ಯಗಳು ಸಹಕರಿಸುವ ವೇದಿಕೆಯಾಗಿ ಕಾರ್ಯನಿರ್ವಹಿಸುತ್ತದೆ, ಭಾರತದ ಮಾನವ ಬಂಡವಾಳ ಸಾಮರ್ಥ್ಯವನ್ನು ಹೆಚ್ಚಿಸಲು ಮತ್ತು ಸಮಗ್ರ, ಭವಿಷ್ಯಕ್ಕೆ ಸಿದ್ಧವಾದ ಬೆಳವಣಿಗೆಯನ್ನು ವೇಗಗೊಳಿಸಲು ಏಕೀಕೃತ ಮಾರ್ಗಸೂಚಿಯನ್ನು ವಿನ್ಯಾಸಗೊಳಿಸುತ್ತದೆ. ಸಾಮಾನ್ಯ ಅಭಿವೃದ್ಧಿ ಕಾರ್ಯಸೂಚಿಯನ್ನು ಅಂತಿಮಗೊಳಿಸುವ ಗುರಿಯನ್ನು ಹೊಂದಿರುವ ತೀವ್ರವಾದ ಚರ್ಚೆಗಳಿಗೆ ಸಮ್ಮೇಳನ ವೇದಿಕೆ ಒದಗಿಸುತ್ತದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಅನುಸರಿಸಬೇಕಾದ ಉತ್ತಮ ಅಭ್ಯಾಸಗಳು ಮತ್ತು ತಂತ್ರಗಳನ್ನು ಒಳಗೊಂಡ "ವಿಕಸಿತ ಭಾರತಕ್ಕಾಗಿ ಮಾನವ ಬಂಡವಾಳ" ಎಂಬ ವಿಷಯದ ಮೇಲೆ ಸಮ್ಮೇಳನವು ಗಮನಹರಿಸುತ್ತದೆ. ಈ ವಿಷಯದ ಅಡಿಯಲ್ಲಿ, ಐದು ಪ್ರಮುಖ ಕ್ಷೇತ್ರಗಳಾದ ಆರಂಭಿಕ ಬಾಲ್ಯ ಶಿಕ್ಷಣ, ಶಾಲಾ ಶಿಕ್ಷಣ, ಕೌಶಲ್ಯ, ಉನ್ನತ ಶಿಕ್ಷಣ, ಕ್ರೀಡೆ ಮತ್ತು ಪಠ್ಯೇತರ ಚಟುವಟಿಕೆಗಳಿಗೆ ವಿಶೇಷ ಒತ್ತು ನೀಡಲಾಗುತ್ತದೆ. ಕಳೆದ ನಾಲ್ಕು ವರ್ಷಗಳಿಂದ ವಾರ್ಷಿಕವಾಗಿ ಪ್ರಧಾನ ಕಾರ್ಯದರ್ಶಿಗಳ ರಾಷ್ಟ್ರೀಯ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ. ಮೊದಲ ಸಮ್ಮೇಳನವನ್ನು ಜೂನ್ ೨೦೨೨ ರಲ್ಲಿ ಧರ್ಮಶಾಲಾದಲ್ಲಿ ನಡೆಸಲಾಯಿತು.

********

ಕೇಂದ್ರ ಗೃಹ ಸಚಿವ ಅಮಿತ್ ಶಾ ನವದೆಹಲಿಯಲ್ಲಿಂದು ಭಯೋತ್ಪಾದನಾ ನಿಗ್ರಹ ಸಮಾವೇಶವನ್ನು ಉದ್ಘಾಟಿಸಿದರು. ಎರಡು ದಿನಗಳ ಸಮಾವೇಶವು, ರಾಷ್ಟ್ರೀಯ ಭದ್ರತೆಯ ಮೇಲೆ ಪರಿಣಾಮ ಬೀರುವ ವಿಷಯಗಳು ಮತ್ತು ಭಯೋತ್ಪಾದನೆಯಿಂದ ಉದ್ಭವಿಸುವ ಬೆದರಿಕೆಗಳ ಕುರಿತು ಚರ್ಚಿಸಲು ಒಂದು ಪ್ರಮುಖ ವೇದಿಕೆಯಾಗಲಿದೆ ಎಂದು ಕೇಂದ್ರ ಗೃಹ ಸಚಿವಾಲಯ ತಿಳಿಸಿದೆ.

ಭಯೋತ್ಪಾದನಾ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿರುವ ಪಡೆಗಳು, ತಾಂತ್ರಿಕ ತಜ್ಞರು, ಕಾನೂನು ಪರಿಣಿತರು ಮತ್ತು ವಿಧಿವಿಜ್ಞಾನ ತಜ್ಞರು ಈ ಸಭೆಯಲ್ಲಿ ಭಾಗವಹಿಸಿದ್ದಾರೆ. ಭಯೋತ್ಪಾದನೆಯೆಂಬ ಪಿಡುಗಿನ ವಿರುದ್ಧ ಸಂಘಟಿತ ಕ್ರಮ ಕೈಗೊಳ್ಳಲು ವಿವಿಧ ಪಾಲುದಾರರ ನಡುವೆ ಔಪಚಾರಿಕ ಮತ್ತು ಅನೌಪಚಾರಿಕ ಸಂಪರ್ಕ ವ್ಯವಸ್ಥೆಯನ್ನು ಸ್ಥಾಪಿಸುವುದು ಹಾಗೂ ಅವರಲ್ಲಿ ಸಮನ್ವಯತೆಯನ್ನು ವೃದ್ಧಿಸುವುದು ಈ ಸಮಾವೇಶದ ಪ್ರಮುಖ ಉದ್ದೇಶವಾಗಿದೆ. ಅಲ್ಲದೆ, ವಿದೇಶಿ ಸಾಕ್ಷ್ಯಗಳನ್ನು ಸಂಗ್ರಹಿಸುವುದು, ಭಯೋತ್ಪಾದನಾ ನಿರೋಧಕ ತನಿಖೆಗಳಲ್ಲಿ ಡಿಜಿಟಲ್ ವಿಧಿವಿಜ್ಞಾನ ಮತ್ತು ದತ್ತಾಂಶ ವಿಶ್ಲೇಷಣೆ ಹಾಗೂ ರಾಷ್ಟ್ರೀಯ ಭದ್ರತೆಗೆ ಎದುರಾಗುತ್ತಿರುವ ಹೊಸ ಮಾದರಿಯ ಬೆದರಿಕೆಗಳ ಕುರಿತು ವಿಶೇಷ ಗೋಷ್ಠಿಗಳು ನಡೆಯಲಿವೆ. ರಾಷ್ಟ್ರೀಯ ತನಿಖಾ ಸಂಸ್ಥೆ ಎನ್ಐಎ ಈ ಸಮಾವೇಶವನ್ನು ಆಯೋಜಿಸಿದೆ.

********

೨೦೪೭ರ ವೇಳೆಗೆ ವಿಕಸಿತ ಭಾರತ ಎಂಬ ದೃಷ್ಟಿಕೋನವನ್ನು ಸಾಕಾರಗೊಳಿಸಲು ಹಳ್ಳಿಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುವುದು ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಡಿಡಿ ನ್ಯೂಸ್‌ಗೆ ನೀಡಿದ ಸಂದರ್ಶನವೊಂದರಲ್ಲಿ ಸಚಿವರು, ಈ ಯೋಜನೆಯು ಗ್ರಾಮೀಣ ಕುಟುಂಬಗಳಿಗೆ ಶಾಸನಬದ್ಧ ವೇತನ ಉದ್ಯೋಗ ಖಾತರಿಯನ್ನು ೧೦೦ ದಿನಗಳಿಂದ ೧೨೫ ದಿನಗಳಿಗೆ ಹೆಚ್ಚಿಸುತ್ತದೆ. ಹೊಸದಾಗಿ ಜಾರಿಗೆ ಬಂದ 'ವಿಕಸಿತ ಭಾರತ ಜಿ ರಾಮ್ ಜಿ' ಕಾಯ್ದೆಯು ಅರ್ಜಿ ಸಲ್ಲಿಸಿದ ೧೫ ದಿನಗಳ ಒಳಗೆ ಕೆಲಸ ಒದಗಿಸದಿದ್ದರೆ ಕಡ್ಡಾಯ ನಿರುದ್ಯೋಗ ಭತ್ಯೆಯನ್ನು ಒದಗಿಸುತ್ತದೆ ಎಂದು ಸಚಿವರು ತಿಳಿಸಿದ್ದಾರೆ. ವೇತನ, ಸಾಮಗ್ರಿ ಮತ್ತು ಆಡಳಿತಾತ್ಮಕ ಘಟಕಗಳ ಮೇಲಿನ ಒಟ್ಟು ವಾರ್ಷಿಕ ನಿಧಿಯ ಅವಶ್ಯಕತೆ, ರಾಜ್ಯ ಪಾಲು ಸೇರಿದಂತೆ ಒಂದು ಲಕ್ಷದ ೫೧ ಸಾವಿರ ಕೋಟಿ ರೂಪಾಯಿಗಳಿಗಿಂತ ಹೆಚ್ಚಿದೆ. ಇದರಲ್ಲಿ ಕೇಂದ್ರದ ಪಾಲು ೯೫ ಸಾವಿರ ಕೋಟಿ ರೂಪಾಯಿಗಳಿಗಿಂತ ಅಧಿಕವಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ಮಾಹಿತಿ ನೀಡಿದರು.

********

ಜೀವನ ಸುಗಮತೆಯನ್ನು ಹೆಚ್ಚಿಸಲು ತಮ್ಮ ಸರ್ಕಾರ ಬದ್ಧವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಮೈ ಗೌ ಇಂಡಿಯಾ My GovIndia ಪೋಸ್ಟ್ ಅನ್ನು ಹಂಚಿಕೊಂಡಿರುವ ಅವರು, ಸರಳ ತೆರಿಗೆ ಕಾನೂನುಗಳು, ಶೀಘ್ರ ವಿವಾದ ಪರಿಹಾರ, ಆಧುನಿಕ ಕಾರ್ಮಿಕ ಸಂಹಿತೆಗಳು ಮತ್ತು ಅಪರಾಧ ಮುಕ್ತ ಅನುಸರಣೆ ನಾಗರಿಕರು ಮತ್ತು ವ್ಯವಹಾರಗಳಿಗೆ ಸಮಸ್ಯೆಗಳನ್ನು ಕಡಿಮೆ ಮಾಡಿದೆ ಎಂದು ತಿಳಿಸಿದ್ದಾರೆ. ತಮ್ಮ ಸರ್ಕಾರ, ವಿಶ್ವಾಸ, ಮತ್ತು ದೀರ್ಘಕಾಲೀನ ಬೆಳವಣಿಗೆಯ ಮೇಲೆ ಒತ್ತು ನೀಡಿದೆ. ಇದು ಉತ್ತಮವಾಗಿ ವಿನ್ಯಾಸಗೊಳಿಸಲಾದ ನೀತಿಯು ದೈನಂದಿನ ಜೀವನವನ್ನು ಹೇಗೆ ಸುಧಾರಿಸುತ್ತದೆ ಎಂಬುದನ್ನು ತೋರಿಸುತ್ತದೆ ಎಂದು ಹೇಳಿದ್ದಾರೆ.

********

ತ್ರಿಪುರಾ ವಿಧಾನಸಭೆಯ ೧೧ನೇ ಸಭಾಧ್ಯಕ್ಷರಾಗಿದ್ದ ಬಿಸ್ವಬಂಧು ಸೇನ್ ಇಂದು ಬೆಳಗ್ಗೆ ನಿಧನರಾಗಿದ್ದಾರೆ. ಅವರ ನಿಧನಕ್ಕೆ ಪ್ರಧಾನಿ ನರೇಂದ್ರ ಮೋದಿ, ಲೋಕಸಭಾಧ್ಯಕ್ಷ ಓಂ ಬಿರ್ಲಾ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಪ್ರಧಾನಿ, ತ್ರಿಪುರಾದ ಪ್ರಗತಿಗೆ ಪುಷ್ಟಿ ನೀಡಲು ಮತ್ತು ಹಲವು ಸಾಮಾಜಿಕ ಉದ್ದೇಶಗಳಿಗೆ ಬಲತುಂಬಿದ ಬಿಸ್ವಬಂಧು ಸೇನ್ ಅವರ ಪ್ರಯತ್ನಗಳನ್ನು ಸ್ಮರಿಸಲಾಗುವುದು ಎಂದು ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ಲೋಕಸಭಾದ್ಯಕ್ಷ ಓಂ ಬಿರ್ಲಾ, ಜನರಿಗೆ ನೀಡಿದ ನಿಸ್ವಾರ್ಥ ಸೇವೆಗಾಗಿ ಬಿಸ್ವಬಂಧು ಸೇನ್ ಅವರು ಸದಾ ಸ್ಮರಣೀಯರಾಗಿದ್ದಾರೆ ಎಂದು ಹೇಳಿದ್ದಾರೆ.

********

ಸ್ವತಂತ್ರ ಹೋರಾಟಗಾರ ಹುತಾತ್ಮ ಉಧಮ್ ಸಿಂಗ್ ಅವರ ೧೨೬ನೇ ಜನ್ಮ ದಿನಾಚರಣೆಯಾದ ಇಂದು ದೇಶ ಅವರನ್ನು ಸ್ಮರಿಸುತ್ತಿದೆ. ೧೮೯೯ ರಲ್ಲಿ ಅವಿಭಜಿತ ಭಾರತದ ಪಂಜಾಬ್‌ನಲ್ಲಿ ಜನಿಸಿದ ಇವರು ಆಗಿನ ಪಂಜಾಬ್‌ನ ಲೆಫ್ಟಿನೆಂಟ್ ಗವರ್ನರ್ ಮೈಕೆಲ್ ಡೈಯರ್ ಅವರನ್ನು ಹತ್ಯೆ ಮಾಡುವ ಮೂಲಕ ಜಲಿಯನ್ ವಾಲಾಬಾಗ್ ಹತ್ಯಾಕಾಂಡಕ್ಕೆ ಸೇಡು ತೀರಿಸಿಕೊಂಡರು. ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ಸ್ವಾತಂತ್ರ್ಯ ಹೋರಾಟಗಾರ ಶಹೀದ್ ಉಧಮ್ ಸಿಂಗ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಗೌರವನಮನ ಸಲ್ಲಿಸಿದ್ದಾರೆ. ಗದರ್ ಚಳುವಳಿಯ ಮೂಲಕ ಭಾರತೀಯ ಸ್ವಾತಂತ್ರ್ಯ ಹೋರಾಟದ ಜ್ವಾಲೆಯನ್ನು ವಿದೇಶಿ ದೇಶಗಳಿಗೆ ಹರಡುವಲ್ಲಿ ಉಧಮ್ ಸಿಂಗ್ ಪ್ರಮುಖ ಪಾತ್ರ ವಹಿಸಿದ್ದರು. ಅವರ ಶೌರ್ಯ ಸಾಹಸಗಾಥೆಯು ದೇಶದ ಯುವಕರಿಗೆ ಸ್ಫೂರ್ತಿದಾಯಕವಾಗಿದೆ ಎಂದು ಸಚಿವರು ಹೇಳಿದ್ದಾರೆ.

********

ಕರ್ನಾಟಕದ ಚಿತ್ರದುರ್ಗದಲ್ಲಿ ಸಂಭವಿಸಿದ್ದ ಬಸ್ ಅಪಘಾತದಲ್ಲಿ ಗಾಯಗೊಂಡಿದ್ದ ಬಸ್ ಚಾಲಕ ಇಂದು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿದ್ದು, ಅಪಘಾತದಲ್ಲಿ ಸಾವನಪ್ಪಿದವರ ಸಂಖ್ಯೆ ಒಟ್ಟು ಏಳಕ್ಕೆ ಏರಿದೆ. ನಿನ್ನೆ ಕಂಟೇನರ್ ಟ್ರಕ್‌ಗೆ ಡಿಕ್ಕಿ ಹೊಡೆದ ನಂತರ ಸ್ಲೀಪರ್ ಕೋಚ್ ಬಸ್‌ಗೆ ಬೆಂಕಿ ಹೊತ್ತಿಕೊಂಡ ಪರಿಣಾಮ ಕನಿಷ್ಠ ಆರು ಜನರು ಜೀವಂತವಾಗಿ ದಹನವಾಗಿದ್ದರು ಮತ್ತು ೨೧ ಜನರಿಗೆ ಗಾಯಗೊಂಡಿದ್ದಾರೆ. ಬಸ್‌ನಿಂದ ಐದು ಮತದೇಹಗಳನ್ನು ಮತ್ತು ಕಂಟೇನರ್ ಟ್ರಕ್‌ನಿಂದ ಒಂದು ಶವವನ್ನು ಹೊರತೆಗೆಯಲಾಗಿದೆ. ಡಿಎನ್‌ಎ ಪರೀಕ್ಷೆಯ ಫಲಿತಾಂಶ ಬಂದ ನಂತರ ಮೃತ ಪ್ರಯಾಣಿಕರ ಸುಟ್ಟ ಮೃತದೇಹಗಳನ್ನು ಅವರ ಕುಟುಂಬಗಳಿಗೆ ಹಸ್ತಾಂತರಿಸಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮೂಳೆ ಮಾದರಿಗಳನ್ನು ವಿಧಿವಿಜ್ಞಾನ ಪರೀಕ್ಷೆಗೆ ಕಳುಹಿಸಲಾಗಿದ್ದು, ಫಲಿತಾಂಶಗಳು ಶೀಘ್ರದಲ್ಲೇ ಬರುವ ನಿರೀಕ್ಷೆಯಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದುರಂತದಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬಗಳಿಗೆ ತಲಾ ೫ ಸಾವಿರ ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ ತಲಾ ೫೦ ಸಾವಿರ ರೂಪಾಯಿ ಪರಿಹಾರವನ್ನು ಘೋಷಿಸಿದ್ದಾರೆ. ಇನ್ನೊಂದೆಡೆ ಚಿಕ್ಕಬಳ್ಳಾಪುರ ತಾಲೂಕಿನ ಅಜ್ಜವಾರ ಗೇಟ್ ಬಳಿ ನಿನ್ನೆ ರಾತ್ರಿ ಸಂಭವಿಸಿದ ಟಿಪ್ಪರ್ ಮತ್ತು ದ್ವಿಚಕ್ರ ವಾಹನಗಳ ನಡುವಿನ ಅಪಘಾತದಲ್ಲಿ ನಾಲ್ವರು ಯುವಕರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ನಡೆದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಂತಾಪ ಸೂಚಿಸಿದ್ದು, ಮೃತರ ಕುಟುಂಬಕ್ಕೆ ತಲಾ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

********

ಭಾರತ ಮತ್ತು ಶ್ರೀಲಂಕಾ ತಂಡಗಳ ನಡುವಿನ ಐದು ಪಂದ್ಯಗಳ ಮಹಿಳಾ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಸರಣಿಯ ಮೂರನೇ ಪಂದ್ಯ ಇಂದು ತಿರುವನಂತಪುರದ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯಲಿದೆ. ಪಂದ್ಯ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಸರಣಿಯಲ್ಲಿ ಆತಿಥೇಯ ಭಾರತ ತಂಡ ಈಗಾಗಲೇ ೨-೦ ಅಂತರದಲ್ಲಿ ಮುನ್ನಡೆ ಸಾಧಿಸಿದೆ. ಕಳೆದ ಭಾನುವಾರ ನಡೆದ ಮೊದಲ

ಪಂದ್ಯದಲ್ಲಿ ಭಾರತ ಎಂಟು ವಿಕೆಟ್‌ಗಳ ಜಯ ದಾಖಲಿಸಿತ್ತು. ನಂತರ ಮಂಗಳವಾರ ವಿಶಾಖಪಟ್ಟಣದಲ್ಲಿ ನಡೆದ ಎರಡನೇ ಪಂದ್ಯದಲ್ಲಿ ಏಳು ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿದ್ದು, ಇಂದಿನ ಪಂದ್ಯದಲ್ಲಿ ಜಯ ದಾಖಲಿಸಿ ಸರಣಿ ವಶಪಡಿಸಿಕೊಳ್ಳುವ ತವಕದಲ್ಲಿ ಭರತ ತಂಡವಿದೆ.